# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದ ಗ್ರಾಮ ಪಂಚಾಯತಿಗಳು ಶಾಸನಬದ್ಧ ಅನುದಾನದಲ್ಲಿ ಮೀಸಲಿರಿಸಿದ ಶೇ 40 ರಷ್ಟನ್ನು ಸಿಬ್ಬಂದಿ ವೇತನಕ್ಕಾಗಿ ಪ್ರತ್ಯೇಕ ಬ್ಯಾಂಕ್ ಖಾತೆ ತೆರೆಯುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಸುತ್ತೋಲೆ ಸಂಖ್ಯೆ ಗ್ರಾಅಪ/29/ಗ್ರಾಪಂಸಿ/2011(ಭಾಗ) ದಿನಾಂಕ: 12.07.2011.
2. ದಿನಾಂಕ 22.02.2016 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಗ್ರಾಮ ಪಂಚಾಯತಿ ನೌಕರರ ಬೇಡಿಕೆಗಳ ಬಗ್ಗೆ ನಡೆದ ಸಭೆಯ ನಡವಳಿಗಳು.

**ಪ್ರಸ್ತಾವನೆ :**

ಪ್ರಸ್ತುತ ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸರ್ಕಾರದಿಂದ ಶಾಸನಬದ್ಧ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಈ ಅನುದಾನದಲ್ಲಿ ಶೇ.60 ರ ಅನುದಾನವನ್ನು ಗ್ರಾಮ ಪಂಚಾಯತಿಗಳ ಕುಡಿಯುವ ನೀರು ಮತ್ತು ಬೀದಿ ದೀಪಗಳ ವಿದ್ಯುತ್ ಬಿಲ್ ಪಾವತಿಸಲು ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಯತಿಗಳಿಗೆ ಎಸ್.ಬಿ.ಎಂ. ಬ್ಯಾಂಕಿನಲ್ಲಿ ಪ್ರತ್ಯೇಕವಾಗಿ ತೆರೆಯಲಾಗಿರುವ ಎಸ್ಕ್ರೋ ಖಾತೆಗಳಿಗೆ ಜಮಾ ಮಾಡಿ ಸದರಿ ಖಾತೆಗಳಿಂದ ಗ್ರಾಮ ಪಂಚಾಯತಿಗಳು ವಿದ್ಯುತ್ ಬಿಲ್‌ಗಳನ್ನು ಪಾವತಿಸುತ್ತಿವೆ. ಇನ್ನುಳಿದ ಶೇ 40 ರಷ್ಟು ಅನುದಾನವನ್ನು ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಪಾವತಿಸಲು ಜಿಲ್ಲಾ ಪಂಚಾಯತಿಗಳ ಮುಖಾಂತರ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲಾಗುತ್ತಿದೆ.

ಮೇಲೆ ಓದಲಾದ (1) ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಪಾವತಿಸಲು ಪ್ರತ್ಯೇಕವಾಗಿ ಬ್ಯಾಂಕ್ ಖಾತೆಗಳನ್ನು ತೆರೆದು ಸದರಿ ಖಾತೆಗಳ ಮುಖಾಂತರ ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಪಾವತಿಸಲು ಸರ್ಕಾರದಿಂದ ನಿರ್ದೇಶನ ನೀಡಲಾಗಿತ್ತು. ಆದರೆ, ಕೆಲವು ಗ್ರಾಮ ಪಂಚಾಯತಿಗಳು ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಪಾವತಿಸಲು ಪ್ರತ್ಯೇಕವಾಗಿ ಬ್ಯಾಂಕ್ ಖಾತೆಗಳನ್ನು ತೆರೆಯದೆ ಸಿಬ್ಬಂದಿ ವೇತನ ಪಾವತಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಮೇಲೆ ಓದಲಾದ (2) ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 22.02.2016 ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿ ನೌಕರರ ಬೇಡಿಕೆಗಳ ಬಗ್ಗೆ ನಡೆಸಿದ ಸಭೆಯಲ್ಲಿ ಶಾಸನಬದ್ಧ ಅನುದಾನದ ಶೇ 40 ರಷ್ಟನ್ನು ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನಕ್ಕಾಗಿ ಉಪಯೋಗಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಸದರಿ ಅನುದಾನವನ್ನು ಆರ್.ಟಿ.ಜಿ.ಎಸ್. ಮೂಲಕ ನೇರವಾಗಿ ಗ್ರಾಮ ಪಂಚಾಯತಿಗಳಿಗೆ ಜಮೆ ಮಾಡಲು ಕ್ರಮ ವಹಿಸುವಂತೆ ನಿರ್ಣಯಿಸಲಾಗಿದೆ. ಆದ್ದರಿಂದ ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದಂತೆ "ಗ್ರಾಮ ಪಂಚಾಯತಿ ಸಿಬ್ಬಂದಿ ವೇತನ" ಖಾತೆಯನ್ನು ಎಸ್.ಬಿ.ಎಂ. ಬ್ಯಾಂಕ್ ಸಹಕಾರದೊಡನೆ ತೆರೆಯಲು ತೀರ್ಮಾನಿಸಲಾಗಿದೆ.

ಮೇಲೆ ಓದಲಾದ (1)ರ ನಿರ್ದೇಶನದಂತೆ ಈಗಾಗಲೇ ಗ್ರಾಮ ಪಂಚಾಯತಿಗಳು ಸಿಬ್ಬಂದಿ ವೇತನ ಪಾವತಿಸಲು ಪ್ರತ್ಯೇಕ ಬ್ಯಾಂಕ್ ಖಾತೆಗಳನ್ನು ತೆರೆದಿದ್ದಲ್ಲಿ, ಸದರಿ ಖಾತೆಗಳಲ್ಲಿರುವ ಮೊತ್ತವನ್ನು ಹೊಸದಾಗಿ ತೆರೆಯಲಾಗುವ "ಗ್ರಾಮ ಪಂಚಾಯತಿ ಸಿಬ್ಬಂದಿ ವೇತನ"(GP Staff Salary Account) ಖಾತೆಗೆ ಜಮಾ ಮಾಡಿ ಸದರಿ ಬ್ಯಾಂಕ್ ಖಾತೆಯನ್ನು ರದ್ದುಗೊಳಿಸಬೇಕಾಗುತ್ತದೆ. ಗ್ರಾಮ ಪಂಚಾಯತಿಗಳ ಕುಡಿಯುವ ನೀರು ಮತ್ತು ಬೀದಿ ದೀಪಗಳ ವಿದ್ಯುತ್ ಬಿಲ್ ಪಾವತಿಸಲು ಎಸ್ಕ್ರೋ ಖಾತೆಗಳನ್ನು ತೆರೆಯಲಾಗಿರುವ ಎಸ್.ಬಿ.ಎಂ. ಬ್ಯಾಂಕಿನಲ್ಲಿಯೇ ಪ್ರತ್ಯೇಕವಾಗಿ "ಗ್ರಾಮ ಪಂಚಾಯತಿ ಸಿಬ್ಬಂದಿ ವೇತನ" ಖಾತೆಗಳನ್ನು ತೆರೆದು, ಸದರಿ ಖಾತೆಗಳಿಗೆ ಶೇ 40 ರ ಶಾಸನಬದ್ಧ ಅನುದಾನವನ್ನು ಜಮಾ ಮಾಡಿ, ಸದರಿ ಖಾತೆಗಳ ಮುಖಾಂತರ ಗ್ರಾಮ ಪಂಚಾಯತಿ ಸಿಬ್ಬಂದಿ ವೇತನ ಪಾವತಿಸಲು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 252 ಗ್ರಾಪಂಅ 2016, ಬೆಂಗಳೂರು, ದಿನಾಂಕ: 23.03.2016**

1. ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ 22.02.2016 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿ ನೌಕರರ ಬೇಡಿಕೆಗಳ ಬಗ್ಗೆ ನಡೆಸಿದ ಸಭೆಯಲ್ಲಿ ತೀರ್ಮಾನಿಸಿದಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನಕ್ಕಾಗಿ ಉಪಯೋಗಿಸಿಕೊಳ್ಳಲು ರಾಜ್ಯ ಸರ್ಕಾರದಿಂದ ಬಿಡುಗಡೆಯಾಗುವ ಶಾಸನಬದ್ಧ ಅನುದಾನದ ಶೇ 40 ರಷ್ಟನ್ನು ಗ್ರಾಮ ಪಂಚಾಯತಿಗಳಿಗೆ ನೇರವಾಗಿ ಬಿಡುಗಡೆ ಮಾಡಲು ಗ್ರಾಮ ಪಂಚಾಯತಿಗಳ ಹೆಸರಿನಲ್ಲಿ ಸ್ಥಳೀಯ ಎಸ್.ಬಿ.ಎಂ. ಶಾಖೆಗಳಲ್ಲಿ ತೆರೆಯುವ "ಗ್ರಾಮ ಪಂಚಾಯತಿ ಸಿಬ್ಬಂದಿ ವೇತನ" ಖಾತೆಗಳಿಗೆ ಜಮೆ ಮಾಡಲು ಎಲ್ಲಾ ಗ್ರಾಮ ಪಂಚಾಯತಿಗಳು ಕೂಡಲೇ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಸಹಕಾರದೊಂದಿಗೆ ಪ್ರತ್ಯೇಕ "ಗ್ರಾಮ ಪಂಚಾಯತಿ ಸಿಬ್ಬಂದಿ ವೇತನ" (GP Staff Salary Account) ಬ್ಯಾಂಕ್ ಖಾತೆ ತೆರೆಯಲು ಆದೇಶಿಸಿದೆ.
2. ದಿನಾಂಕ 12.07.2011ರ ಸರ್ಕಾರದ ಸುತ್ತೋಲೆಯಲ್ಲಿನ ನಿರ್ದೇಶನದಂತೆ ಗ್ರಾಮ ಪಂಚಾಯತಿಗಳಲ್ಲಿ ಸಿಬ್ಬಂದಿ ವೇತನ ಪಾವತಿಸಲು ತೆರೆಯಲಾಗಿರುವ ಬ್ಯಾಂಕ್ ಖಾತೆಗಳಲ್ಲಿರುವ ಮೊತ್ತವನ್ನು "ಗ್ರಾಮ ಪಂಚಾಯತಿ ಸಿಬ್ಬಂದಿ ವೇತನ" ಖಾತೆಗೆ ವರ್ಗಾವಣೆ ಮಾಡಲು ತಿಳಿಸಲಾಗಿದೆ. ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಾತಿ ಮೊತ್ತದ ಶೇ 40 ರಷ್ಟನ್ನು(ಉಪಕರಗಳ ಮೊತ್ತವನ್ನು ಹೊರತುಪಡಿಸಿ) "ಗ್ರಾಮ ಪಂಚಾಯತಿ ಸಿಬ್ಬಂದಿ ವೇತನ" ಖಾತೆಗೆ ಜಮೆ ಮಾಡಲು ತಿಳಿಸಲಾಗಿದೆ.
3. ಈ ಖಾತೆಯಲ್ಲಿನ ಮೊತ್ತವನ್ನು ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಪಾವತಿಸಲು ಮಾತ್ರ ಬಳಸತಕ್ಕದ್ದು. ಇದರಲ್ಲಿ ಯಾವುದೇ ತರಹದ ಲೋಪ ಬಾರದಂತೆ ಈ ಖಾತೆಯನ್ನು ನಿರ್ವಹಿಸುವ ಹೊಣೆಗಾರಿಕೆಯು ಸಂಬಂಧಪಟ್ಟ ಗ್ರಾಮ ಪಂಚಾಯತಿಯ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳದ್ದು ಆಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
23/3/2016
(ಟಿ.ಪಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.
3. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಸರ್ಕಾರದ ಕಾರ್ಯದರ್ಶಿಗಳು (ಆಯವ್ಯಯ ಮತ್ತು ಸಂಪನ್ಮೂಲ), ಆರ್ಥಿಕ ಇಲಾಖೆ.
5. ನಿರ್ದೇಶಕರು (ಪಂ. ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ಅಧ್ಯಕ್ಷರುಗಳು, ಕಾರ್ಯ ನಿರ್ವಾಹಕ ಅಧಿಕಾರಿಗಳ ಮೂಲಕ.
8. ಮುಖ್ಯ ವ್ಯವಸ್ಥಾಪದರು, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಜಿ-ಸೇವಾ ಶಾಖೆ, ಲೇಡಿ ಕರ್ಜನ್ ರಸ್ತೆ, ಬೆಂಗಳೂರು, ರವರಿಗೆ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ,
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಕಾರ್ಯದರ್ಶಿ (ಪಂ. ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ರವರ ಆಪ್ತ ಕಾರ್ಯದರ್ಶಿ.
4. ಶ್ರೀ ಮಾರುತಿ ಮಾನ್ಪಡೆ, ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ ಅಧ್ಯಕ್ಷ.
5. ಕಛೇರಿ/ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತಕ್ಕೆ.